ಹುಲಸೂರು ಮತಕ್ಷೇತ್ರದಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸುವುದು

314 (428) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಗೆ ಹೊಸದಾಗಿ ಮಂಜೂರು ಮಾಡಲಾಗಿರುವ ಪ್ರೌಢಶಾಲೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

ಆ) ಈ ಅವಧಿಯಲ್ಲಿ ಯಾವ ಯಾವ ಗ್ರಾಮಗಳಲ್ಲಿ ಹೊಸ ಪ್ರೌಢಶಾಲೆಗಳಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆ ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು) ;

ಇ) ಹುಲಸೂರು ಮತಕ್ಷೇತ್ರದ ವ್ಯಾಪ್ತಿಗೆ ಬರುವ ಹಲಸಿ ತೂಗಂವ್, ನಿಂಬೂರು, ಸುಲ್ತಾನಾಬಾದ್‌ವಾಡಿ, ಮಾಸಿಮಾಡ ಮತ್ತು ಕನಕಟ್ಟಾ ಗ್ರಾಮಗಳಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ತೆರೆಯುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಈ ಪೈಕಿ ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿದೆ ; ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಸದರಿ ಕ್ಷೇತ್ರದ ಯಾವ ಯಾವ ಗ್ರಾಮಗಳಲ್ಲಿ ಹೊಸ ಪ್ರೌಢಶಾಲೆಗಳನ್ನು ಪ್ರಾರಂಭಿಸಲಾಗುವುದು?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಕಳೆದ 3 ವರ್ಷಗಳಿಂದ ಬೀದರ್ ಜಿಲ್ಲೆಗೆ 04 ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ. ಅವುಗಳ ವಿವರ ಈ ಕೆಳಗಿನಂತಿದೆ.

1) ಸಸ್ತಾಪುರ ಬಸವಕಲ್ಯಾಣ ತಾ
2) ಬಂಡಾರಕುಮಟಾ ಔರಾದ್ ತಾ
3) ಮಂಠಾಳ, ಬಸವಕಲ್ಯಾಣ ತಾ
4) ಸಂಗೊಳಗಿ, ಬೀದರ್ ತಾ

ಆ) 1999-2000 ಮತ್ತು 2000-2001ನೇ ಸಾಲಿನಲ್ಲಿ ಯಾವುದೇ ಆಯವ್ಯಯ ಹಂಚಿಕೆ ಇಲ್ಲದಿರುವುದರಿಂದ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿರುವುದಿಲ್ಲ. 2001-02ನೇ ಸಾಲಿನಲ್ಲಿ 10 ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಬಂದಿದ್ದು ಮೇಲ್ಕಂಡ 4 ಗ್ರಾಮಗಳಿಗೆ ಸರ್ಕಾರಿ ಪ್ರೌಢಶಾಲೆಯನ್ನು ಮಂಜೂರು ಮಾಡಲಾಗಿದೆ. (ಔರಾದ್ ಕ್ಷೇತ್ರ-1, ಬಸವಕಲ್ಯಾಣ ಕ್ಷೇತ್ರ-8, ಹುಮನಾಬಾದ್ ಕ್ಷೇತ್ರ-1)

ಇ) ಹೌದು.

ಈ) ಎರಡು. (ಮದಕಟ್ಟಿ ಮತ್ತು ತೂಗಾಂವ್ ಗ್ರಾಮ), ಹುಲಸೂರು ಮತಕ್ಷೇತ್ರಕ್ಕೆ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಿರುವುದಿಲ್ಲ.

ಜನ ಶಾಲಾ ಯೋಜನೆ

315 (482) ಶ್ರೀ ರಾಮದಾಸ್ ಎ. (ಕೃಷ್ಣರಾಜ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಜನಶಾಲಾ ಶೈಕ್ಷಣಿಕ ಯೋಜನೆ ಜಾರಿಯಲ್ಲಿದೆಯೇ ; (ಸಮಗ್ರ ಮಾಹಿತಿ ನೀಡುವುದು) ;

ಆ) ಈ ಯೋಜನೆಯಿಂದ ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳೇನು ;